146 ಬಿ.ಆರ್ ಹೆ... ನಿ-330 ಗೃ-8 ...

**ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಿ.ಕೆ ಹರಿಪ್ರಸಾದ್, ವಿರೋಧ ಪಕ್ಷದ ನಾಯಕರು ರವರು ನಿಯಮ 330 ರಡಿಯಲ್ಲಿ ಮಂಡಿಸಿರುವ ಸೂಚನೆಗೆ ಉತ್ತರ**

********

ಪ್ರಶ್ನೆ: ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನೈತಿಕ ಪೊಲೀಸ್‌ಗಿರಿ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿದ್ದು, ಇತ್ತೀಚೆಗೆ ಉಪ್ಪಿನಂಗಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದ ಘಟನೆ ಸೇರಿದಂತೆ, ಅನೇಕ ಘಟನೆಗಳು ಮರುಕಳಿಸುತ್ತಿದ್ದು, ರಾಜಕೀಯ ಒತ್ತಡಗಳಿಗೆ ಮಣಿದು ಪೊಲೀಸ್ ಇಲಾಖೆಯು ನ್ಯಾಯಯುತವಾಗಿ ಕರ್ತವ್ಯವನ್ನು ನಿರ್ವಹಿಸಲು ವಿಫಲವಾಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದು ಹಾಗೂ ಪತ್ರಿಕೆಯಲ್ಲಿ ವರದಿಯಾಗಿರುವ ಬಗ್ಗೆ.

ಉತ್ತರ: ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನೈತಿಕ ಪೊಲೀಸ್ ಗಿರಿ ವಿಷಯ ಗಮನಕ್ಕೆ ಬಂದ ತಕ್ಷಣ ಪ್ರಕರಣಗಳನ್ನು ದಾಖಲು ಮಾಡಿ, ಕೂಡಲೇ ಕ್ರಮ ಜರುಗಿಸಲಾಗುತ್ತದೆ.

ನೈತಿಕ ಪೊಲೀಸ್‌ಗಿರಿಗೆ ಸಂಬಂಧಿಸಿದಂತೆ 2021ರಲ್ಲಿ ಒಟ್ಟು 07 ಪ್ರಕರಣಗಳು ದಾಖಲಾಗಿದ್ದು, ಈ ಸಂಬಂಧ ಒಟ್ಟು 23 ಆರೋಪಿತರುಗಳನ್ನು ದಸ್ತಗಿರಿ ಮಾಡಲಾಗಿದೆ.

ದಕ್ಷಿಣ ಕನ್ನಡ ಜಿಲ್ಲಾ ಪೊಲೀಸ್ ಘಟಕ ವ್ಯಾಪ್ತಿಯಲ್ಲಿ 2022ನೇ ಸಾಲಿನಲ್ಲಿ ನೈತಿಕ ಪೊಲೀಸ್‌ಗಿರಿ ಒಟ್ಟು 03 ಪ್ರಕರಣಗಳು ದಾಖಲಾಗಿದ್ದು, ಈ ಸಂಬಂಧ ಉಪ್ಪಿನಂಗಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ 02 ಪ್ರಕರಣ ದಾಖಲಾಗಿರುತ್ತದೆ. ಒಟ್ಟು 03 ಪ್ರಕರಣದಲ್ಲಿ ಒಟ್ಟು 09 ಜನ ಆರೋಪಿಗಳನ್ನು ಬಂಧಿಸಲಾಗಿರುತ್ತದೆ. ಸದರಿ ಪ್ರಕರಣಗಳು ತನಿಖೆಯಲ್ಲಿದ್ದು, ಅತೀ ಶೀಘ್ರದಲ್ಲಿಯೇ ಅಂತಿಮ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಲಾಗುವುದು.

**ಮುಂಜಾಗ್ರತಾ ಕ್ರಮಗಳ ವಿವರ:**

- ದಕ್ಷಿಣ ಕನ್ನಡ ಜಿಲ್ಲೆಯು ಈಗಾಗಲೇ ಮತೀಯವಾಗಿ ಮತ್ತು ರಾಜಕೀಯವಾಗಿ ಅತೀ ಸೂಕ್ಷ್ಮ ಜಿಲ್ಲೆಯೆಂದು ಗುರುತಿಸಿಕೊಂಡಿರುವುದರಿಂದ ನೈತಿಕ ಪೊಲೀಸ್‌ಗಿರಿ ಪ್ರಕರಣಗಳಲ್ಲಿ ಭಾಗಿಯಾಗಿರುವವರ ವಿರುದ್ಧ ರೌಡಿ ಹಾಳೆ ತೆರೆಯಲಾಗುತ್ತಿದ್ದು ಮತ್ತು ಭದ್ರತಾ ಕಾಯ್ದೆ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ.
- ಇಂತಹ ಘಟನೆಗಳು ನಡೆಯದಂತೆ ಅಪರಾಧ ಮಿಮರ್ಶನಾ ಸಭೆಯಲ್ಲಿ ಠಾಣಾಧಿಕಾರಿಗಳಿಗೆ ಸೂಕ್ತ ಸಲಹೆ ಸೂಚನೆಗಳನ್ನು ನೀಡುತ್ತಿದ್ದು ಮತ್ತು ಗುಪ್ತ ಮಾಹಿತಿ ಸಂಗ್ರಹಿಸಿ ಎಲ್ಲಾ ರೀತಿಯ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.
- ಇಂತಹ ಪ್ರಕರಣಗಳಲ್ಲಿ ಅಪರಾಧಿಗಳ ಮೇಲೆ ಸೂಕ್ತ ನಿಗಾ ಇಡಲಾಗಿದ್ದು, ಅವರ ಚಲನವಲನಗಳ ಮೇಲೆ ಮತ್ತು ಇಂತಹ ಯಾವುದೇ ಪ್ರಕರಣಗಳು ಮರುಕಳಿಸದಂತೆ ಕ್ರಮ ವಹಿಸಲಾಗುತ್ತಿದೆ.
- ಪೊಲೀಸ್ ಇಲಾಖೆಯು ಕೇವಲ ದೈನಂದಿನ ಕರ್ತವ್ಯಗಳನ್ನಷ್ಟೇ ನಿರ್ವಹಿಸದೇ ಸಮಾಜಿಕ ಜಾಲತಾಣಗಳ ಮೇಲೆ ಸಹಾ ನಿಗಾ ಇರಿಸಿ ಅದರಲ್ಲಿ ಪ್ರಚೋದನಾಕಾರಿಯಾಗಿ ಪೋಸ್ಟ್‌ಗಳನ್ನು ಬಿತ್ತರಿಸುವವರ ಮೇಲೆಯೂ ಸಹ ನಿಗಾ ಇರಿಸಿದ್ದು, ಈ ಸಂಬಂಧ ಪ್ರಕರಣವನ್ನು ಸಹ ದಾಖಲಿಸಲಾಗುವುದು.
- ಯಾವುದೇ ಘಟನೆಗಳು ನಡೆದ ತಕ್ಷಣ ಇಲಾಖೆಯ ಹಿರಿಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಸ್ಥಿತಿಯನ್ನು ಅವಲೋಕಿಸಿ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

...2...

- ಪ್ರತಿಯೊಂದು ಸಣ್ಣ ಘಟನೆಯನ್ನು ಗಂಭೀರವಾಗಿ ಪರಿಗಣಿಸಿ ಕೋಮುಗಲಭೆಗಳನ್ನು ತಡೆಯಲು ಕಠಿಣ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ. ಎಲ್ಲಾ ಸಮುದಾಯದ ಮುಖಂಡರನ್ನು ಒಟ್ಟುಗೂಡಿಸಿ ನಾಗರಿಕ ಸಮುದಾಯ ಸಭೆ ನಡೆಸಲಾಗುತ್ತಿದೆ. ನೆಲಮಟ್ಟದ ಗುಪ್ತಚರ ಸಂಗ್ರಹಣೆ ಮತ್ತು ಬೀಟ್ ಸಿಬ್ಬಂದಿಯಿಂದ ಮುಂಚಿತವಾಗಿಯೇ ಮಾಹಿತಿ ಸಂಗ್ರಹಿಸಿ, ಮೂಲಭೂತವಾದಿ ಗುಂಪುಗಳು ಅಥವಾ ಸಮಾಜ ವಿರೋಧಿ ಅಂಶಗಳ ಮೇಲೆ ನಿಗಾ ಇಡಲಾಗಿದೆ ಇಂತಹ ಸಮಾಜಘಾತುಕ ಚಟುವಟಿಕೆಗಳಲ್ಲಿ ತೊಡಗುವವರ ಮೇಲೆ ಗೂಂಡಾ ಕಾಯಿದೆ ಹಾಕಲಾಗುವುದು. ಅಲ್ಲದೇ ನಿಯಮಿತ ಗಸ್ತು ಸುತ್ತುಗಳನ್ನು, ನೈಟ್ ರೌಂಡ್ ಮತ್ತು ಸೆಕ್ಟರ್ ಸುತ್ತುಗಳನ್ನು ಕಟ್ಟುನಿಟ್ಟಾಗಿ ಮತ್ತು ಪರಿಣಾಮಕಾರಿಯಾಗಿ ಮಾಡಲಾಗುತ್ತಿದೆ. ಗುಡ್ ಮಾರ್ನಿಂಗ್ ಬೀಟ್ ಅನ್ನು ನಿಯಮಿತವಾಗಿ ನಿಯೋಜಿಸಲಾಗುತ್ತದೆ ಮತ್ತು ಎಲ್ಲಾ ಮಸೀದಿಗಳು, ಚರ್ಚ್‌ಗಳು ಹಾಗೂ ದೇವಾಲಯಗಳಿಗೆ ಭೇಟಿ ನೀಡಲಾಗುತ್ತಿದೆ.

**ಸಂಖ್ಯೆ: ಒಇ 304 ಎಸ್‌ಎಸ್‌ಟಿ 2022**

(ಆರಗ ಜ್ಞಾನೇಂದ್ರ)
ಗೃಹ ಸಚಿವರು